# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 692 |
| ಸದಸ್ಯರ ಹೆಸರು | : | ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 25-03-2020 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | 2018-19ನೇ ಆಯವ್ಯಯದಲ್ಲಿ ಘೋಷಿಸಿರುವಂತೆ ಇಳಿವಯಸ್ಸಿನ ಅಶಕ್ತ ಕಲಾವಿದರ ಗೌರವಯುತ ಜೀವನ ನಿರ್ವಹಣೆಗಾಗಿ ನೀಡುತ್ತಿರುವ ಮಾಸಾಶನ ಮೊತ್ತವನ್ನು ರೂ.1000 ರಿಂದ 1500 ರೂ.ಗಳಿಗೆ ಹೆಚ್ಚಿಸಿ ಒಟ್ಟು 8330 ಕಲಾವಿದರಿಗೆ ಮಾಸಾಶನ ಮಂಜೂರು ಮಾಡಲಾಗಿರುವುದನ್ನು ಅನುಷ್ಠಾನಕ್ಕೆ ತರಲಾಗುವುದೇ; | ರಾಜ್ಯದಲ್ಲಿ ಕಷ್ಟ ಪರಿಸ್ಥಿತಿಯಲ್ಲಿರುವ ಹಿರಿಯ ಸಾಹಿತಿ / ಕಲಾವಿದರಿಗೆ ನೀಡುತ್ತಿರುವ ಮಾಸಾಶನವನ್ನು ಸರ್ಕಾರದ ಆದೇಶ ಸಂಖ್ಯೆ:ಕಸಂಪಾ 14 ಕಗೌಧ 2014, ದಿನಾಂಕ: 08-12-2014ರ ಆದೇಶದನ್ವಯ ದಿನಾಂಕ: 01-11-2014ರಿಂದ ಜಾರಿಗೆ ಬರುವಂತೆ ರೂ.1000 ಗಳಿಂದ ರೂ.1500ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಿ ಅನುಷ್ಠಾನಗೊಳಿಸಲಾಗಿರುತ್ತದೆ.<br>ತದನಂತರ ಸರ್ಕಾರದ ಆದೇಶ ಸಂಖ್ಯೆ:ಕಸಂಪಾ 06 ಕಗೌಧ 2019 ದಿನಾಂಕ:16.11.2019ರ ಆದೇಶದಲ್ಲಿ ಸಾಹಿತಿ ಕಲಾವಿದರಿಗೆ ನೀಡುತ್ತಿರುವ ಮಾಶಾಸನವನ್ನು ರೂ.1500 ಗಳಿಂದ ರೂ.2000/- ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದ್ದು, ಅದರಂತೆ ಅನುಷ್ಠಾನಗೊಳಿಸಲಾಗುತ್ತಿದೆ. |
| (ಆ) | ಈ ಯೋಜನೆಯನ್ನು ವಿಸ್ತರಿಸಿ ಇನ್ನು ಹೆಚ್ಚಿನ ಕಲಾವಿದರನ್ನು ಗುರುತಿಸಿ ಅವರುಗಳಿಗೂ ಸಹ ಮಾಸಾಶನ ಮಂಜೂರು ಮಾಡಲಾಗುತ್ತಿದೆಯೇ; ಮಂಜೂರು ಮಾಡಿದ್ದಲ್ಲಿ, ಇದೂವರೆಗೂ ಮಾಸಾಶನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಸಂಪೂರ್ಣ ವರದಿ ನೀಡುವುದು) | • ಹೌದು.<br>• ಈವರೆಗೂ ಮಾಸಾಶನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ 12171, ವಿವರವನ್ನು ಅನುಬಂಧದಲ್ಲಿರಿಸಿದೆ. |

ಸಂಖ್ಯೆ: ಕಸಂಪಾ 87 ಕವಿಸ 2020

(ಸಿ.ಟಿ.ರವಿ)
ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ,
ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವರು.